ಪಲ್ಲವಿ ಆಕುರಾತಿ, ಭಾ.ಆ.ಸೇ
ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ

C/o ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
2ನೇ ಮಹಡಿ, ಡಾ. ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು-560001
✆ : 080-22879381/82/83
ಇ–ಮೇಲ್ : icps.kar@gmail.com

ಸಂ:ಕೆಎಸ್ಐಸಿಪಿಎಸ್/ಮರ/ಸ.ನ್ಯಾ/125/2020–21/1048

ದಿನಾಂಕ:01.01.2021

ಜಿಲ್ಲಾಧಿಕಾರಿಗಳು,
ಹಾಗೂ ಅಧ್ಯಕ್ಷರು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಕೊಪ್ಪಳ ಜಿಲ್ಲೆ.

ಮಾನ್ಯರೇ,

**ವಿಷಯ:** WP4/2020 ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿ:15–12–2020 ರಂದು ನೀಡಿದ ಆದೇಶದಂತೆ ಮಕ್ಕಳ ಪಾಲನಾ ಕೇಂದ್ರಗಳಲ್ಲಿರುವ ಮಕ್ಕಳು ಶೈಕ್ಷಣಿಕ ವ್ಯಾಸಂಗ ಮಾಡಲು ಎಲ್ಲಾ ಪೂರಕ ಸೌಲಭ್ಯಗಳನ್ನು ಒದಗಿಸುವ ಹಾಗೂ ಮನೆಗೆ ತೆರಳಿದ ಮಕ್ಕಳಿಗೆ ಸಹ ಶಿಕ್ಷಣವನ್ನು ಒದಗಿಸುವ ಬಗ್ಗೆ.

**ಉಲ್ಲೇಖ:**
1. Contagtion Of Covid-19 Virus In Childern Protection Homes ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ SNW (C)No.4/2020 ದಿ:15.12.2020.
2. ಬಾಲ ನ್ಯಾಯ ಮಂಡಳಿಗಳ ಹಾಗೂ ಮಕ್ಕಳ ಕಲ್ಯಾಣ ಸಮಿತಿಗಳ ಅಧ್ಯಕ್ಷರಿಗೆ ನಿರ್ದೇಶನಾಲಯದಿಂದ ಬರೆದಿರುವ ಪತ್ರ ಸಂಖ್ಯೆ: ಕೆಎಸ್ಐಸಿಪಿಎಸ್/ಮರ/ಸ.ನ್ಯಾ/125/2020–21, ದಿ:24–12–2020.
3. ಸಮಗ್ರ ಶಿಕ್ಷಣ ಕರ್ನಾಟಕ ಇವರ ಜ್ಞಾಪನಾ ಪತ್ರ ಸಂಖ್ಯೆ:ಸಿ3/DIRP /140JDA2020/ವಿನೋಅ/13553, ದಿ:10–08–2020.

* * * *

ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್–19 ಸಾಂಕ್ರಾಮಿಕ ಪಿಡುಗಿನಿಂದ ಮಕ್ಕಳ ಪಾಲನಾ ಕೇಂದ್ರಗಳಲ್ಲಿ ವಾಸ್ತವ್ಯ ಪಡೆದಿರುವ ಮಕ್ಕಳು ದೈನಂದಿನ ಶಾಲೆಗೆ ಹೋಗಲು ಸಾಧ್ಯವಾಗದೆ ವಿದ್ಯಾಭ್ಯಾಸಕ್ಕೆ ಹೆಚ್ಚಾಗಿ ತೊಂದರೆಯಾಗಿರುವುದು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಸೂಕ್ತ ಸೌಲಭ್ಯ ಒದಗಿಸಲು ಉಲ್ಲೇಖಿತ ಆದೇಶದಲ್ಲಿ ನಿರ್ದೇಶಿರುತ್ತದೆ. (ಉಲ್ಲೇಖಿತ ಆದೇಶವನ್ನು ಮಾಹಿತಿಗಾಗಿ ಈ ಪತ್ರದೊಂದಿಗೆ ಲಗತ್ತಿಸಲಾಗಿದೆ)

ಆದ್ದರಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಕೋರಲಾಗಿದೆ.

1. ರಾಜ್ಯದಲ್ಲಿರುವ ಎಲ್ಲಾ ನೋಂದಾಯಿಸಲ್ಪಟ್ಟ ಮಕ್ಕಳ ಪಾಲನಾ ಕೇಂದ್ರಗಳಿಗೆ(Govt,Govt-aided, Un-aided-Private CCIs) ಅಗತ್ಯವಿರುವ ಮೂಲಭೂತ ಸೌಕರ್ಯಗಳು, ಲೇಖನ ಸಾಮಾಗ್ರಿಗಳು, ಪ್ರಿಂಟರ್, ಪುಸ್ತಕ ಇತ್ಯಾದಿ ಅವಶ್ಯವಿರುವ ಸೌಕರ್ಯಗಳ ಬಗ್ಗೆ ಮಾಹಿತಿ ನೀಡಲು ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಗಳಿಗೆ ಉಲ್ಲೇಖಿತ (2)ರ ಪತ್ರದಲ್ಲಿ ಕೋರಲಾಗಿರುತ್ತದೆ. ಅದರಂತೆ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಗಳ ಜೊತೆ ಸಮನ್ವಯದೊಂದಿಗೆ ತಕ್ಷಣ ಸದರಿ ಮಾಹಿತಿಯನ್ನು ಅವರಿಂದ ಪಡೆಯಲು ಕ್ರಮವಹಿಸುವುದು.

ಜೊತೆಗೆ ಎಲ್ಲಾ ನೋಂದಾಯಿಸಲ್ಪಟ್ಟ ಮಕ್ಕಳ ಪಾಲನಾ ಕೇಂದ್ರಗಳಲ್ಲಿನ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಆನ್‌ಲೈನ್ ತರಗತಿ(Online Classes)ಯಲ್ಲಿ ಭಾಗವಹಿಸಲು ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಪರಿಶೀಲಿಸಿ ಪ್ರತಿ ಮಕ್ಕಳ ಪಾಲನಾ ಕೇಂದ್ರವಾರು ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಗುರುತಿಸತಕ್ಕದ್ದು.

ಮೇಲಿನಂತೆ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲ ನ್ಯಾಯ ಮಂಡಳಿಗಳಿಂದ ಸ್ವೀಕರಿಸಲಾದ ಮಾಹಿತಿ ಹಾಗೂOnline Classes ಗೆ ಅವಶ್ಯವಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಗುರುತಿಸಿದ ಮೂಲಭೂತ ಸೌಲಭ್ಯಗಳ ಮಾಹಿತಿಯನ್ನು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಹಾಗೂ ಅನುದಾನ ರಹಿತ ಖಾಸಗಿ ಮಕ್ಕಳ ಪಾಲನಾ ಕೇಂದ್ರಗಳಿಗೆ ಕಳುಹಿಸಿಸದರಿ ಸೌಕರ್ಯಗಳನ್ನು ಒದಗಿಸಲು ಸೂಚಿಸುವುದು ಹಾಗೂ ಒದಗಿಸಿರುವ ಬಗ್ಗೆ ಖಚಿತಪಡಿಸಿಕೊಂಡು 15 ದಿನಗಳೊಳಗೆ ಕೇಂದ್ರ ಕಛೇರಿಗೆ ಅನುಪಾಲನಾ ವರದಿಯನ್ನು ಸಲ್ಲಿಸುವುದು.

ಮೇಲಿನಂತೆ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲ ನ್ಯಾಯ ಮಂಡಳಿಗಳಿಂದ ಸ್ವೀಕರಿಸಲಾದ ಮಾಹಿತಿ ಹಾಗೂ Online Classes ಗೆ ಅವಶ್ಯವಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಗುರುತಿಸಿದ ಮೂಲಭೂತ ಸೌಲಭ್ಯಗಳ ಮಾಹಿತಿಯಂತೆ ಸರ್ಕಾರಿ ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಎಲ್ಲಾ ಅವಶ್ಯಕ ಸೌಲಭ್ಯಗಳನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ತಕ್ಷಣ ಒದಗಿಸುವುದು. ಒಂದು ವೇಳೆ ಸದರಿ ಮೂಲಭೂತ ಸೌಲಭ್ಯ/ಸಾಮಗ್ರಿಗಳನ್ನು ಒದಗಿಸಲು ಹೆಚ್ಚಿನ ಅನುದಾನ ಬೇಡಿಕೆ ಇದ್ದಲ್ಲಿ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.ಈ ಎಲ್ಲಾ ಪ್ರಕ್ರಿಯೆಯನ್ನು ಈ ಪತ್ರ ತಲುಪಿದ 10 ದಿನಗಳೊಳಗಾಗಿ ಪೂರೈಸುವುದು.

2. ಪ್ರಸ್ತುತ ರಾಜ್ಯದಲ್ಲಿರುವ ಎಲ್ಲಾ ನೋಂದಾಯಿಸಲ್ಪಟ್ಟಮಕ್ಕಳ ಪಾಲನಾ ಕೇಂದ್ರಗಳಲ್ಲಿ (Govt, Govt-aided, Un-aided-Private CCIs)ವ್ಯಾಸಂಗ ಮಾಡುತ್ತಿರುವ ಮಕ್ಕಳು 2021ನೇ ಸಾಲಿನ ಮಾರ್ಚ್ ಮತ್ತು ಏಪ್ರಿಲ್ ಅಥವಾ ಈ ಶೈಕ್ಷಣಿಕ ವರ್ಷದ ಪರೀಕ್ಷೆಯು ಯಾವ ಮಾಹೆಯಲ್ಲಿ ಹಮ್ಮಿಕೊಳ್ಳಲಾಗುವುದೋ ಆವಾಗ ಈ ಪರೀಕ್ಷೆಗಳಲ್ಲಿ ಪಾಲ್ಗೊಳ್ಳಲು ಅನುಕೂಲವಾಗುವಂತೆ ಸಮಗ್ರ ರೀತಿಯಲ್ಲಿ ತರಬೇತಿಯನ್ನು ನೀಡುವುದು ಅವಶ್ಯಕವಾಗಿರುತ್ತದೆ. ಈ ನಿಟ್ಟಿನಲ್ಲಿ ಮಕ್ಕಳಿಗೆ ಹೆಚ್ಚುವರಿಯಾಗಿ ಅಭ್ಯಾಸಿಸಲು ಎಲ್ಲಾ ನೋಂದಾಯಿಸಲ್ಪಟ್ಟ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿExtra Classes ಹಮ್ಮಿಕೊಳ್ಳುವುದು.

3. ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮಕ್ಕಳ ಪಾಲನಾ ಕೇಂದ್ರಗಳಲ್ಲಿದ್ದ ಮಕ್ಕಳನ್ನು ಪೋಷಕರ ವಶಕ್ಕೆ ಒಪ್ಪಿಸಲಾಗಿದ್ದು, ಈ ಮಕ್ಕಳ ವಿದ್ಯಾಭ್ಯಾಸ ಮುಂದುವರೆಸಲು ತೊಂದರೆಯಾಗಿರುವ ಸಾಧ್ಯತೆ ಇರುತ್ತದೆ. ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲ ನ್ಯಾಯ ಮಂಡಳಿಗಳ ಸಹಕಾರದೊಂದಿಗೆ ಮನೆಗೆ ತೆರಳಿದ ಎಲ್ಲಾ ಮಕ್ಕಳ ಶೈಕ್ಷಣಿಕ ಸಮೀಕ್ಷೆಯನ್ನು ಪ್ರತಿಯೊಂದು ಮಗುವಾರು ಕೈಗೊಂಡು ಶಾಲೆಗೆ ಹೋಗಲು ಸಾಧ್ಯವಾಗದಂತಹ ಮಗುವಿನ ಕುಟುಂಬದ ಆರ್ಥಿಕ ವಾಸ್ತವ ಸ್ಥಿತಿಗತಿಯನ್ನು ಸವಿವರವಾಗಿ ಪರಿಶೀಲಿಸಿ ಅಂತಹ ಕುಟುಂಬದಲ್ಲಿನ ಪ್ರತಿ ಮಗುವಿಗೆ ಮಾಹೆಯಾನ ತಲಾ ರೂ.2000/-ಗಳನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು. ಈ ಬಗ್ಗೆ ಅನುಬಂಧದಲ್ಲಿ ಒದಗಿಸಲಾದ ನಮೂನೆಯನ್ನು ಗೂಗಲ್ ಡ್ರೈವ್‌ನಲ್ಲಿ

ಹಾಕಲಾಗಿದ್ದು, ಅದನ್ನು 1 ವಾರದೊಳಗೆ ಭರ್ತಿ ಮಾಡಲು ಹಾಗೂ ಪ್ರತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಸಹಿಯೊಂದಿಗೆ ನಿರ್ದೇಶನಾಲಯಕ್ಕೆ ಸಲ್ಲಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.

ಸದರಿ ನಮೂನೆಯಲ್ಲಿ **ಆರ್ಥಿಕ ಕಾರಣಗಳಿಂದ ಶಿಕ್ಷಣ ವಂಚಿತರಾಗಿರುವ ಮಕ್ಕಳ** ವಿವರಗಳನ್ನು ಸರ್ಕಾರಿ, ಸರ್ಕಾರಿ–ಅನುದಾನಿತ ಹಾಗೂ ಅನುದಾನ ರಹಿತ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳ ವಿಂಗಡಣೆಯೊಂದಿಗೆಪ್ರತ್ಯೇಕವಾಗಿ ಕ್ರೂಢೀಕರಿಸಿ ಪ್ರತಿ ಮಗುವಿಗೆ ಮಾಹೆಯಾನ ತಲಾ ರೂ.2000/–ಗಳನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಒಂದು ವಾರದೊಳಗಡೆ ಸಲ್ಲಿಸುವುದು.

4. ಇದಲ್ಲದೆ ಭೌಗೋಳಿಕ ಸಾಮೀಪ್ಯದಲ್ಲಿ ಅಂದಾಜು 20 ರಿಂದ 25 ಮಕ್ಕಳಿರುವ ಮಾಹಿತಿ ಒದಗಿಸಿದ್ದಲ್ಲಿ ಒಬ್ಬ ಶಿಕ್ಷಕರನ್ನು ನೇಮಿಸಿಕೊಳ್ಳಲು ಶಿಕ್ಷಣ ಇಲಾಖೆಯ ವಿದ್ಯಾಗಮ ಕಾರ್ಯಕ್ರಮದಲ್ಲಿ ಅವಕಾಶ ಇರುವುದರಿಂದಈ ಕುರಿತು ಉಲ್ಲೇಖ(3)ರಂತೆ ಶಿಕ್ಷಣ ಇಲಾಖೆಯಿಂದ ನೇಮಿಸಲಾದ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ಕ್ರಮ ತೆಗೆದುಕೊಳ್ಳಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಸೂಚಿಸಲು ಕೋರಿದೆ.

5. ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಜಿಲ್ಲೆಯಲ್ಲಿ ಎಲ್ಲಾ ನೋಂದಾಯಿಸಲ್ಪಟ್ಟ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಒದಗಿಸುತ್ತಿರುವ ಮೂಲಭೂತ ಸೌಕರ್ಯ ಹಾಗೂ ಆನ್‌ಲೈನ್ ತರಗತಿಗಳ ಕಾರ್ಯನಿರ್ವಹಣೆ ಕುರಿತು ಪ್ರತಿ ಮಾಹೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ರವರಿಗೆ ವರದಿ ನೀಡುವುದು ಹಾಗೂ ಪ್ರತಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.

6. ಶಿಕ್ಷಣ ಇಲಾಖೆಯಿಂದ ಉಲ್ಲೇಖ(3)ರಂತೆ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನು ಈಗಾಗಲೇ ನೇಮಿಸಲಾಗಿರುವುದರಿಂದ ಶಿಕ್ಷಣ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳ ಸೌಲಭ್ಯವು ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಪ್ರಯೋಜನ ಪಡೆಯುತ್ತಿರುವ (ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ ಮಕ್ಕಳು ಮತ್ತು ಪಾಲನೆ ಮತ್ತು ರಕ್ಷಣೆಯಲ್ಲಿರುವ ಮಕ್ಕಳು) ಎಲ್ಲಾ ಮಕ್ಕಳಿಗೂ ತಲುಪುವಂತೆ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದೊಡನೆ ಸಮನ್ವಯದ ಸಾಧಿಸುವ ಮೂಲಕ ಸೌಲಭ್ಯ ಒದಗಿಸಲು ಅಗತ್ಯ ಕ್ರಮ ವಹಿಸುವುದು.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕಾರ್ಯಗತಗೊಳಿಸಿರುವ ಬಗ್ಗೆ ಅನುಪಾಲನಾ ವರದಿಯನ್ನು 15 ದಿನಗಳೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವುದು.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.